ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 15, 2020**

# ಪತ್ರಿಕಾ ಪ್ರಕಟಣೆ

## ಕೃಷಿ ಮಾರುಕಟ್ಟೆ ಕಾಯ್ದೆಯಿಂದ ರೈತರಿಗೆ ಯಾವುದೇ ತೊಂದರೆ ಇಲ್ಲ

**ಬೆಂಗಳೂರು, ಮೇ 15 ( ಕರ್ನಾಟಕ ವಾರ್ತೆ ) :**

ಎಪಿಎಂಸಿ ತಿದ್ದುಪಡಿ ಕಾಯ್ದೆಯ ಅನುಷ್ಠಾನದಿಂದ “ರೈತರೇ ಮೊದಲು” ಎಂಬ ಘೋಷವಾಕ್ಯದ ಅನುಷ್ಠಾನ ಸಾಧ್ಯವಾಗುತ್ತದೆ. ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಪ್ರಾಂಗಣದಲ್ಲಿ ಅಥವಾ ನೇರವಾಗಿ ಮಾರಾಟ ಮಾಡುವ ಅವಕಾಶ ಹೊಂದಿರುತ್ತಾರೆ. ಇದರಿಂದ ರೈತರಿಗೆ ತಮ್ಮ ಉತ್ಪನ್ನಗಳಿಗೆ ಯೋಗ್ಯ ಧಾರಣೆ ದೊರೆಯುವ ಅವಕಾಶ ಕಲ್ಪಿಸಿದಂತಾಗುತ್ತದೆ. ಈ ಕಾಯ್ದೆಯಿಂದ ಪಿಎಂಸಿ ಕಮಿಟಿಗಳ ಅಸ್ತಿತ್ವಕ್ಕೆ ಯಾವುದೇ ಆಗುವುದಿಲ್ಲ. ಅವು ಹಿಂದಿನಂತೆ ಮುಂದುವರೆಯುತ್ತವೆ. ಮಾರುಕಟ್ಟೆ ಪ್ರಾಂಗಣದ ಹೊರಗೆ ಅಧಿಸೂಚಿತ ಕೃಷಿ ಉತ್ಪನ್ನಗಳ ವಹಿವಾಟು ನಡೆಸಲು ಮತ್ತು ಮೇಲ್ವಿಚಾರಣೆಯನ್ನು ಕೃಷಿ ಮಾರಾಟ ನಿರ್ದೇಶಕರು ಮಾಡುತ್ತಾರೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಇಂದು ಇಲ್ಲಿ ತಿಳಿಸಿದರು.

2007ರಲ್ಲಿ ಖಾಸಗಿ ಮಾರುಕಟ್ಟೆ ಈಗಾಗಲೇ ಪ್ರಾರಂಭವಾಗಿದೆ ರಿಲೈನ್ಸ್ , ಮೋರ್ ಅಂತಹ ಕಂಪನಿಗಳು ಭಾಗವಹಿಸುತ್ತಿದೆ 2008 ರಿಂದಲೇ ಖಾಸಗಿ ಮಾರುಕಟ್ಟೆಗಳ ಅಸ್ತಿತ್ವಕ್ಕೆ ಬಂದಿದೆ. ಉದಾ: ಮೆಟ್ರೋ ಕ್ಯಾಷ್ ಆಂಡ್ ಕ್ಯಾರಿ ಪ್ರೈ ಲಿಮೆಟೆಡ್ 2007ರಲ್ಲಿ ಇ-ಟ್ರೇಡಿಂಗ್ ಪ್ರಾರಂಭವಾಗಿದೆ. 2013ರಲ್ಲಿ ಆನ್ ಲೈನ್ ಟ್ರೆಂಡಿಂಗ್ ನಡೆಯುತ್ತಿದೆ

ಈ ತಿದ್ದುಪಡಿ ಕಾಯ್ದೆಯಿಂದ ಎಪಿಎಂಸಿ ಕಮಿಟಿಗಳನ್ನು ಮಾರುಕಟ್ಟೆ ಪ್ರಾಂಗಣಕ್ಕೆ ಸೀಮಿತಗೊಳಿಸಿ ರೈತರು ಉತ್ತಮ ಧಾರಣೆ ಪಡೆಯಲು ಅವಕಾಶ ಒದಗಿಸಿ ಆ ಮೂಲಕ ರೈತರ ಬೆಳೆಗಳಿಗೆ ಸ್ಪರ್ಧಾತ್ಮಕ ಮಾರುಕಟ್ಟೆ ಒದಗಿಸಿ ರೈತರ ಹಿತ ಕಾಯಲು ಅವಕಾಶ ನೀಡುತ್ತದೆ. ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿಯವರಿಗಾಗಲಿ, ಕೇಂದ್ರ ಸರ್ಕಾರಕ್ಕಾಗಲಿ ರೈತರ ಹಿತಾಸಕ್ತಿ ಸಂರಕ್ಷಣೆಯೇ ಮುಖ್ಯ. 2022ರ ವೇಳೆಗೆ ರೈತರ ಆದಾಯ ದ್ವಿಗುಣ ಮಾಡಬೇಕು.

ರೈತರಿಗೆ ನೆರವಾಗಬೇಕು ಎನ್ನುವುದಕ್ಕಾಗಿಯೇ ಅನೇಕ ಕಾರ್ಯಕ್ರಮಗಳನ್ನು ಮತ್ತು ಸುಧಾರಣೆಗಳನ್ನು ಜಾರಿಗೆ ತರಲಾಗುತ್ತಿದೆ.

ಈಗಲೂ ಎಪಿಎಂಸಿ ಕಾಯ್ದೆಯನ್ನೇನೂ ನಾವು ತೆಗೆದು ಹಾಕಿಲ್ಲ. ಕೇವಲ ಕಾಯ್ದೆಯ ಎರಡು ಸೆಕ್ಷನ್ ಗಳಿಗೆ ತಿದ್ದುಪಡಿ ಮಾಡಿದ್ದೇವೆ.ಈ ಸುಧಾರಣೆಯ ಉದ್ದೇಶ- ನಮ್ಮ ರೈತರಿಗೆ ಮಾರುಕಟ್ಟೆಯ ಹೆಚ್ಚಿನ ಆಯ್ಕೆಗಳು ಲಭಿಸಲಿವೆ. ನಮ್ಮ ರೈತರು ಎಪಿಎಂಸಿ ಯಾಗಲೀ ಅಥವಾ ಇತರೇ ವರ್ತಕರ ಅಧೀನಕ್ಕೆ ಒಳಪಡುವುದಿಲ್ಲ. ತಮ್ಮಿಷ್ಟದಂತೆ ಯಾರಿಗೆ ಬೇಕಾದರೂ ಉತ್ಪನ್ನ ಮಾರಾಟ ಮಾಡಬಹುದು. ಬೆಂಬಲ ಬೆಲೆಗೆ ಕಡಿಮೆ ದರದಲ್ಲಿ ಖರೀದಿ ಮಾಡುವ, ಎಷ್ಟೋ ಉದಾಹರಣೆಗಳು ನಮ್ಮ ಕಣ್ಣಮುಂದೆಯೇ ಇದೆ. ಈ ಶೋಷಣೆಯನ್ನು ಇನ್ನು ಮುಂದೆ ತಪ್ಪಿಸಬಹುದು. ಇನ್ನು ಮುಂದೆ ಎಪಿಎಂಸಿಯಲ್ಲಿ ವ್ಯವಹಾರ ಮಾಡುವ ವರ್ತಕರು ರೈತರನ್ನು ಶೋಷಣೆ ಮಾಡುವುದು ತಪ್ಪುತ್ತದೆ.

ಖಾಸಗಿಯವರೂ ಎಪಿಎಂಸಿ ಹೊರಗಡೆ ವ್ಯವಹಾರ ಮಾಡುವಾಗಲೂ ಕೂಡ ಷರತ್ತನ್ನು ಪಾಲಿಸಬೇಕಾಗುತ್ತದೆ. ಸರ್ಕಾರದ ಅನುಮತಿ ಪಡೆಯಬೇಕಾಗಿದೆ. ಇದೆಲ್ಲವೂ ನಮ್ಮ ರೈತರ ಹಿತರಕ್ಷಣೆ, ಮಾರಾಟ ಸ್ವಾತಂತ್ರ್ಯ ನೀಡಲು ಸುಧಾರಣೆ ತರಲಾಗುತ್ತಿದೆ. ಆದರೆ ಕೆಲವರು ಇದರ ವಿರುದ್ಧ ಅಪಪ್ರಚಾರ ಮಾಡಿ ನಮ್ಮ ರೈತರ ದಾರಿ ತಪ್ಪಿಸುವ ಕೆಲಸ ಮಾಡುತ್ತಾರೆ.

ರೈತರ ಹಿತಕ್ಕೆ ಧಕ್ಕೆ ಬರುವುದಾದರೆ, ರೈತರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದ ನಾನು ಮುಖ್ಯಮಂತ್ರಿ ಸ್ಥಾನದಲ್ಲಿ ಒಂದು ಕ್ಷಣವೂ ಮುಂದುವರೆಯುವುದಿಲ್ಲ. ಮೆಕ್ಕೆಜೋಳ ಬೆಳೆದ ರೈತರಿಗೆ ನೆರವಾಗುವ ಕುರಿತು ಕೋವಿಡ್ 19ರ ಲಾಕ್ ಡೌನ್ ಹಿನ್ನೆಲೆಯಲ್ಲಿ ಸಂಕಷ್ಟಕ್ಕೆ ಒಳಗಾದ ಮೆಕ್ಕೆಜೋಳ ಬೆಳೆಗಾರರಿಗೆ ಕೆಎಂಎಫ್ ಮೂಲಕ ಮೆಕ್ಕೆ ಜೋಳ ಖರೀದಿಸಲು ಈಗಾಗಲೇ 4ಜಿ ವಿನಾಯಿತಿ ನೀಡಲಾಗಿದೆ.

· ಕೇಂದ್ರ ಸರ್ಕಾರ 1760 ರೂ. ಕನಿಷ್ಠ ಬೆಂಬಲ ಬೆಲೆ ನಿಗದಿ ಪಡಿಸಿದೆ. ಆದರೆ ರೈತರಿಗೆ ಇಷ್ಟು ಬೆಲೆ ದೊರೆಯದ ಕಾರಣ ರಾಜ್ಯದಲ್ಲಿ ಮೆಕ್ಕೆಜೋಳ ಬೆಳೆದಿರುವ ಸುಮಾರು 10 ಲಕ್ಷ ರೈತರಿಗೆ ತಲಾ 5 ಸಾವಿರ ರೂ. ಸಹಾಯಧನ ನೀಡಲಾಗುವುದು.ಇದಕ್ಕೆ ಸುಮಾರು 500 ಕೋಟಿ ರೂ. ವೆಚ್ಚವಾಗಲಿದೆ.ಇದರಿಂದಾಗಿ ಕೋವಿಡ್ 19 ಹಿನ್ನೆಲೆಯಲ್ಲಿ ಘೋಷಿಸಲಾದ ಪ್ಯಾಕೇಜ್ ಮೊತ್ತ 2272 ಕೋಟಿ ರೂ. ಗಳಷ್ಟಾಗಿದೆ. ನೈಸರ್ಗಿಕ ವಿಕೋಪದಿಂದ ಮೇಕೆ, ಕುರಿಗಳ ಸಾವು ಸಂಭವಿಸಿದಲ್ಲಿ ಅವುಗಳಿಗೆ 5 ಸಾವಿರ ರೂ. ಪರಿಹಾರ ನೀಡಲಾಗುವುದು.

ನೈಸರ್ಗಿಕ ವಿಕೋಪದಿಂದ ಮೇಕೆ, ಕುರಿಗಳ ಸಾವು ಸಂಭವಿಸಿದಲ್ಲಿ ಅವುಗಳಿಗೆ 5 ಸಾವಿರ ರೂ. ಪರಿಹಾರ ನೀಡಲಾಗುವುದು.ರಾಜ್ಯದಲ್ಲಿ ಕೋವಿಡ್ 19 ವಿರುದ್ದದ ಸಮರದಲ್ಲಿ ಮುಂಚೂಣಿಯ ಲ್ಲಿ ಕಾರ್ಯನಿರ್ವಹಿಸುತ್ತಿರುವ 42500 ಆಶಾ ಕಾರ್ಯಕರ್ತೆರ ವಿಶೇಷ ಸೇವೆಯನ್ನು ಗುರುತಿಸಿ ತಲಾ 3 ಸಾವಿರ ಪ್ರೋತ್ಸಾಹ ಧನ ನೀಡಲಾಗುತ್ತಿದೆ ಇದಕ್ಕೆ 12 ಕೋಟಿ ರೂ ವೆಚ್ಚವಾಗಲಿದೆ . ಈ ಮೊತ್ತವನ್ನು ಸಹಕಾರ ಸಂಘ ಸಂಸ್ಥೆಗಳಿಮದ ಕ್ರೂಡೀಕರಿಸಿ ಸಹಕಾರ ಇಲಾಖೆಯ ವತಿಯಿಂದ ನೀಡಲಾಗುತ್ತದೆ

## APMC AMENDMENT ACT POINTS

Bengaluru, May 15 (Karnataka Information)

Our motto is “farmers first”. New amended APMC act will provide an opportunity for farmers to sell their produce directly to any purchaser outside the APMC yards or in other APMCs. This will help the farmers in getting remunerative price for their produce. Amendment will not dilute the powers or the work of the APMCs says Chief Minister B.S. Yediyurappa.

All these marketing activities will be monitored by the Director of state APMC. Definitely this new amended act will benefit farmers in improving their income and suffering from losses due to market fluctuations. Intention of my government and the Prime minister Narendra Modi is farmers should be protected from market trends. This amendment will indirectly help farmers in doubling their income by 2022 , the PM’s dream .I want to clarify that we have not removed the APMC act , we are only amending two sections of the APMC act which enable farmers to sell their produce at the markets which they indent and like This amendment will also eliminate the exploitation of the farmers by market forces to certain extent.

Many times we have seen farmers resorting to distress sales due to collapse in the prices of commodities. But new amendment will allow the farmers to sell their produce at a market selected by him. Many are misleading the farmers on this issue and amendment. But I reiterate that I being the CM sworn in the name of farmers I will not sit in this chair for a minute if the farmers interests are affected.

## ವಸತಿ ಯೋಜನೆಗಳಿಗೆ ಭೂಮಿ ಮಂಜೂರು ಕುರಿತು ಸಭೆ

**ಬೆಂಗಳೂರು, ಮೇ 15 ( ಕರ್ನಾಟಕ ವಾರ್ತೆ ) :**

ವಸತಿ ಸಚಿವರ ಅಧ್ಯಕ್ಷತೆಯಲ್ಲಿ ಮೇ 15 ರಂದು ಸಂಜೆ 4 ಗಂಟೆಗೆ ಸಚಿವರ ಕೊಠಡಿಯಲ್ಲಿ ವಸತಿ ಇಲಾಖೆಯ ಕರ್ನಾಟಕ ಗೃಹ ಮಂಡಳಿ ಯೋಜನೆಗಳಿಗೆ ಸಂಬಂಧಿಸಿದಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ, ಆನೇಕಲ್ ಮತ್ತು ರಾಮನಗರ ಜಿಲ್ಲೆಯ ಮಾಗಡಿಯಲ್ಲಿನ ಸ್ಥಳೀಯ ಯೋಜನಾ ಪ್ರಾಧಿಕಾರಗಳು ವಸತಿ ಯೋಜನೆಗಳಿಗೆ ಸಂಬಂಧಿಸಿದ ಭೂಮಿಗಳಿಗೆ ಶೀಘ್ರ ಮಂಜೂರಾತಿ ನೀಡುವ ಬಗ್ಗೆ ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಿರ್ದೇಶಕರು ನಗರ ಮತ್ತು ಗ್ರಾಮಾಂತರ ಯೋಜನೆ, ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ, ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಅಪರ ನಿರ್ದೇಶಕರು ನಗರ ಯೋಜನೆ, ನೆಲಮಂಗಲ, ಮಾಗಡಿ, ಆನೇಕಲ್ ಸ್ಥಳೀಯ ಯೋಜನಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಸದಸ್ಯ ಕಾರ್ಯದರ್ಶಿಗಳು ಸೇರಿದಂತೆ ಇತರ ಸಂಬಂಧಪಟ್ಟ ಅಧಿಕಾರಿ ವರ್ಗದವರು ಹಾಜರಿದ್ದರು.

ಛಾಯಾಚಿತ್ರ ಲಗತ್ತಿಸಿದೆ )

**ನೀರಿನ ಬಿಲ್ ಪಾವತಿ** ಹಾಗೂ ಕಾಲರಾ ತಡೆಗಟ್ಟುವ ನಿಟ್ಟಿನಲ್ಲಿ ಬೆಂಗಳೂರು ಜಲಮಂಡಳಿಯ ಕ್ರಮಗಳು

**ಬೆಂಗಳೂರು, ಮೇ 15 ( ಕರ್ನಾಟಕ ವಾರ್ತೆ ) :** ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. **ಕಾಲರಾ ಮತ್ತು ಜಿ.ಇ.** ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 01.05.2020 ರಿಂದ 14.05.2020 ರವರೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ, ಕ್ರೋಢೀಕರಿಸಿದ ಫಲಿತಾಂಶದ ಸಂಪೂರ್ಣ ವಿವರವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿರುವುದು. ಫಲಿತಾಂಶದ ಸಂಕ್ಷಿಪ್ತ ವಿವರ ಈ ಕೆಳಕಂಡಂತಿದೆ.

ದಿನಾಂಕ 01.05.2020 ರಿಂದ 14.05.2020 ರವರೆಗೆ ದಾಖಲುಗೊಂಡ ಒಟ್ಟು 36 ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 03 ಮಾದರಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ನೀರು ಸರಬರಾಜು ಇಲ್ಲದಿದ್ದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 28 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, 27 **ಮಾದರಿಗಳ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ**. 01 ಮಾದರಿಯ ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 05 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

**ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿರುತ್ತದೆ ಹಾಗೂ ಮಂಡಳಿಯ ಆ್ಯಪ್ ಆಗಿರುವ "BWSSB Payment App" ಮುಖಾಂತರ Quick Pay ಮಾಡಬಹುದಾಗಿರುತ್ತದೆ. ಮಂಡಳಿಯ ವೆಬ್‌ಸೈಟ್‌ನಲ್ಲಿ "BWSSB Payment App" ನ ಲಿಂಕ್ ಲಭ್ಯವಿದ್ದು, Google Play store ನಲ್ಲಿಯೂ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment System)ನಿಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ನೀರಿನ ಬಿಲ್ ಪಾವತಿಯನ್ನು ಮಾಡಬಹುದಾಗಿರುತ್ತದೆ. ಅಲ್ಲದೆ ಜಲಮಂಡಳಿ ಕಛೇರಿಗಳ ಆವರಣದಲ್ಲಿರುವ ಕಿಯೋಸ್ಕ್ ಮಿಷನ್‌ಗಳಲ್ಲಿ ಹಾಗೂ ಬೆಂಗಳೂರು ಒನ್ ಸೇವಾ ಕೇಂದ್ರದ ಮುಖಾಂತರವೂ ಸಹ ಹಣ ಪಾವತಿ ಮಾಡಬಹುದಾಗಿರುತ್ತದೆ. ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.**

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ಸಹಾಯವಾಣಿಯ ಸಂಖ್ಯೆ:22238888 ಹಾಗೂ 1916 ಮತ್ತು ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್:www.bwssb.gov.in ನಲ್ಲಿ ಪಡೆಯಬಹುದಾಗಿರುತ್ತದೆ.

# Steps taken to prevent cholera and water bill payment

BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from

Health & Family Welfare Department, Government Epidemic Disease Hospital, Bangalore, 01.05.2020 to 14.05.2020 tested the samples and results of the samples are enclosed with this letter. The abstract of the result is as mentioned below.

Among the 36 cases reported from 01.05.2020 to 14.05.2020, samples from 03 area was not collected since water supply for that area was not on the day when the water sample were collected, samples from 28 area were collected and result of **27 sample was obtained as suitable for potable purpose(SPP**). Result of 01 sample is awaited. The areas of remaining 05 cases does not comes under BWSSB limits.

**All consumers are requested to make payment through the BWSSB official website: www.bwssb.gov.in. BWSSB's App called "BWSSB Payment App" is also available and Quick Pay can be made through this app. Customers can login to the app via the link provided in BWSSB official website and app can also be downloaded from Google pay store. Payment can also be made through online services of BBPS (Bharath Bill Payment System) like Paytm, Phone pe, Google pay etc**. and in Bangalore one and KIOSK Machines at BWSSB Office Premises.

It is also informed that BWSSB Call center number 080-22238888 is available 24/7 to receive the complaint of customers. Along with this, whatsapp number:8762228888 and toll free number 1916 is also available. Service station address and contact details can be obtained through BWSSB official **web site :www.bwssb.gov.in .**

## ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳ ದಾಳಿ

**ಬೆಂಗಳೂರು, ಮೇ 15 ( ಕರ್ನಾಟಕ ವಾರ್ತೆ ) :** ದೇವನಹಳ್ಳಿ ತಾಲ್ಲೂಕು, ಅತ್ತಿಬೆಲೆ ಗ್ರಾಮದ ನಿವಾಸಿಯೊಬ್ಬರು ಪ್ರೆಸ್ಟೀಜ್ ಗಾಲ್ಫ್ ಶಾಯರ್‌ನಲ್ಲಿ ವಾಸವಾಗಿರುವ ಕುಟುಂಬಕ್ಕೆ ಕಾರ್ ಡ್ರೈವರ್ ಆಗಿ ಕೆಲಸ ಮಾಡಿಕೊಂಡಿರುತ್ತಾರೆ. ಅವರ ಮಾಲೀಕರು ವಾಸವಾಗಿರುವ ವಿಲ್ಲಾದ ಎಲೆಕ್ಟ್ರಿಕ್ ಬಿಲ್ ಪ್ರೆಸ್ಟೀಜ್ ಗಾಲ್ಫ್ ಶಾಯರ್ ಹೆಸರಿನಲ್ಲಿಯೇ ಬರುತ್ತಿದ್ದು, ವಿಲ್ಲಾದ ಖಾತೆ ಮಾಡಿಸಿಕೊಂಡು ಎಲೆಕ್ಟ್ರಿಕ್ ಬಿಲ್ ಕೂಡ ಮಾಲೀಕರ ಹೆಸರಿಗೆ ಬದಲಾವಣೆ ಮಾಡಿಸಿಕೊಳ್ಳಲು ಖಾತೆ ಮಾಡಿಕೊಡಲು ಕೋರಿ ದೇವನಹಳ್ಳಿ ತಾಲ್ಲೂಕಿನ ಕಾರಹಳ್ಳಿ ಗ್ರಾಮ ಪಂಚಾಯ್ತಿ ಕಛೇರಿಗೆ ದಿನಾಂಕ:13/03/2020 ರಂದು ಅರ್ಜಿ ಹಾಗೂ ರೂ.67,034/–ಗಳ ಡಿಡಿಯೊಂದಿಗೆ ಸಲ್ಲಿಸಿಕೊಂಡಿರುತ್ತಾರೆ. ಯಾವುದೇ ತೊಂದರೆ ಆಗದಂತೆ ಖಾತೆ ಮಾಡಿಕೊಡಲು ಕಾರಹಳ್ಳಿ ಗ್ರಾಮ ಪಂಚಾಯ್ತಿ ಕಛೇರಿಯ ಕಾರ್ಯದರ್ಶಿ ಶ್ರೀ.ರಾಜೇಶ್ ಎಂಬುವವರು ರೂ.50,000/– ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟು, ಕೊನೆಗೆ ರೂ.35,000/– ಗಳನ್ನು

ನೀಡುವಂತೆ ತಿಳಿಸಿ, ರೂ.10,000/- ಗಳನ್ನು ಫೋನ್ ಪೇ ಮೂಲಕ ಪಡೆದುಕೊಂಡಿರುತ್ತಾರೆ. ನಂತರ ಖಾತೆಯ ಬಗ್ಗೆ ಕೇಳಿದಾಗ ಉಳಿದ ಲಂಚದ ಹಣ ರೂ.20,000/- ಗಳನ್ನು ತೆಗೆದುಕೊಂಡು ಬರುವಂತೆ ತಿಳಿಸಿದ್ದು, ಲಂಚದ ಹಣವನ್ನು ನೀಡಲು ಇಷ್ಟವಿಲ್ಲದ ಕಾರಣ ಭ್ರಷ್ಟಾಚಾರ ನಿಗ್ರಹ ದಳ **ಬೆಂಗಳೂರು ಗ್ರಾಮಾಂತರ ಜಿಲ್ಲಾ** ಠಾಣೆಗೆ ನೀಡಿದ ದೂರಿನ ಮೇರೆಗೆ ಠಾಣಾ ಮೊ.ಸಂ 05/2020 ಕಲಂ 7(ಎ) ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988 ರಡಿಯಲ್ಲಿ ದಿನಾಂಕ:14/05/2020 ರಂದು ಪ್ರಕರಣ ದಾಖಲಾಗಿತ್ತು.

ಈ ದೂರಿನನ್ವಯ ಈ ದಿನ ನಡೆಸಿದ ಟ್ರ್ಯಾಪ್ ಕಾರ್ಯಾಚರಣೆಯಲ್ಲಿ ಶ್ರೀ.ರಾಜೇಶ್, ಕಾರ್ಯದರ್ಶಿ, ಕಾರಹಳ್ಳಿ ಗ್ರಾಮ ಪಂಚಾಯ್ತಿ, ದೇವನಹಳ್ಳಿ ತಾಲ್ಲೂಕು ರವರು ರೂ.20,000/- ಲಂಚದ ಹಣವನ್ನು ಪಿರ್ಯಾದುದಾರರಿಂದ ಪಡೆದುಕೊಂಡಿದ್ದು, ಬೆಂಗಳೂರು ಗ್ರಾಮಂತರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ದಾಳಿ ನಡೆಸಿ, ಲಂಚದ ಹಣದ ಸಮೇತ ಆರೋಪಿಯನ್ನು ವಶಕ್ಕೆ ಪಡೆದು, ದಸ್ತಗಿರಿ ಮಾಡಿ, ತನಿಖೆ ಕೈಗೊಂಡಿರುತ್ತಾರೆ.